## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ವಿಕಾಸ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ವಿಧಾನಸಭಾಕ್ಷೇತ್ರದ ಗ್ರಾಮಗಳನ್ನು ಆಯ್ಕೆ ಮಾಡುವ ಬಗ್ಗೆ.

ಓದಲಾಗಿದೆ: 1.ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ:50:ಸುಗ್ರಾಯೋ:2012 ದಿ:20.10.2014
2.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಇವರ ಪತ್ರ ಸಂಖ್ಯೆ: ಜಿಪಂ: ಗ್ರಾ.ವಿ.ಯೋ: ಸಿಆರ್: 01/ 2014-15 ದಿ:26.12.2014.

**ಪ್ರಸ್ತಾವನೆ:**

ಗ್ರಾಮಗಳ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ಎಲ್ಲಾ ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ 1000 ಗ್ರಾಮಗಳನ್ನು ಆಯ್ಕೆ ಮಾಡಿ ಗ್ರಾಮ ವಿಕಾಸ ಯೋಜನೆಯನ್ನು ಅಭಿವೃಧಿಪಡಿಸಲು ಉದ್ದೇಶಿಸಲಾಗಿದೆ. ಸದರಿ ಯೋಜನೆಯ ಅನುಷ್ಠಾನ ಮಾಡುವ ಬಗ್ಗೆ ಗ್ರಾಮಗಳ ಆಯ್ಕೆ, ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ (1) ರ ಸರ್ಕಾರದ ಆದೇಶವನ್ನು ಹೊರಡಿಸಲಾಗಿದೆ. ಅದರನ್ವಯ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ವಿಧಾನಸಭಾ ಕ್ಷೇತ್ರದ 4 ಗ್ರಾಮಗಳನ್ನು ಆಯ್ಕೆ ಮಾಡಿ ಶಾಸಕರಿಂದ ಶಿಫಾರಸು ಮಾಡಿದ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಿಂದ ಅನುಮೋದನೆ ಪಡೆದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ ಅವರು ಓದಲಾದ (2) ರಲ್ಲಿ ಸರ್ಕಾರದ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ನಿಯಮಗಳನ್ವಯ ಪರಿಶೀಲಿಸಿದ್ದು, ಆಯ್ಕೆ ಪಟ್ಟಿಯನ್ನು ಅಧಿಕೃತವಾಗಿ ಹೊರಡಿಸಲು ಸರ್ಕಾರಿ ಆದೇಶದ ಅಗತ್ಯವಿದೆ. ಅನುಬಂಧದಲ್ಲಿರುವ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ವಿಧಾನಸಭಾ ಕ್ಷೇತ್ರದ 4 ಗ್ರಾಮಗಳಲ್ಲಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:01:ಗ್ರಾವಿಯೋ:2015. ಬೆಂಗಳೂರು, ದಿನಾಂಕ: 03.03.2015.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಗ್ರಾಮ ವಿಕಾಸ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ವಿಧಾನಸಭಾ ಕ್ಷೇತ್ರದ 4 ಗ್ರಾಮಗಳಿಗೆ ಅನುಬಂಧದಲ್ಲಿ ನಮೂದಿಸಿರುವಂತೆ ಸದರಿ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಹೊರಡಿಸಲಾದ ಅನುದಾನದ ಮಿತಿಯಂತೆ ಅನುಬಂಧದಲ್ಲಿ ವಿವರಿಸಿರುವಂತೆ ಕ್ರಮ ವಹಿಸುವುದು.
2. ಗ್ರಾಮ ವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿಗಳನ್ವಯ ಅನುಷ್ಠಾನಕ್ಕೆ ತರುವುದು.

3. ಗ್ರಾಮದಲ್ಲಿ ಪರಿಶಿಷ್ಟ ಜಾತಿ: ಪರಿಶಿಷ್ಟ ಪಂಗಡದ ಪ್ರದೇಶದ ಅಭಿವೃದ್ಧಿಗೆ ನಿಗದಿಪಡಿಸಿದ ಅನುದಾನವನ್ನು ಮಾರ್ಗಪಲ್ಲಟ ಮಾಡದೆ ಆ ಜನಾಂಗದವರು ವಾಸವಿರುವ ಪ್ರದೇಶದಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಆದ್ಯತೆಯ ಮೇರೆಗೆ ಅನುಷ್ಠಾನಕ್ಕೆ ತರುವುದು.
4. ಗ್ರಾಮ ವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕವಾಗಿ ನಿರ್ವಹಿಸುವುದು ಹಾಗೂ ಆಯಾ ಕಾರ್ಯಕ್ರಮಗಳ ಅನುದಾನಕ್ಕೆ ಸರ್ಕಾರ ಹೊರಡಿಸಿದ ಆದೇಶ/ಮಾರ್ಗಸೂಚಿ/ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಬೂವನಹಳ್ಳಿನಾಗರಾಜ್)**
ನಿರ್ದೇಶಕರು(ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಯನ್ನು:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಿತ್ರದುರ್ಗ.
2. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
4. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಚಿತ್ರದುರ್ಗ
5. ಮುಖ್ಯ ಲೆಕ್ಕಾಧಿಕಾರಿ ಮತ್ತು ಮುಖ್ಯ ಯೋಜನಾಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ
6. ಸಂಕಲನಕಾರರು, ರಾಜ್ಯಪತ್ರ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ.
8. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
9. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
10. ಸಂಪಾದಕರು, ಕರ್ನಾಟಕ ವಿಕಾಸ, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು
11. ಹೆಚ್ಚುವರಿ.

## ಅನುಬಂಧ

### ಗ್ರಾಮ ವಿಕಾಸ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹೊಸ ದುರ್ಗ ವಿಧಾನಸಭಾಕ್ಷೇತ್ರದ ಗ್ರಾಮಗಳ ಆಯ್ಕೆ ಪಟ್ಟಿ

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:01:ಗ್ರಾವಿಯೋ:2015, ದಿನಾಂಕ:03.03.2015

ಜಿಲ್ಲೆ:ಚಿತ್ರದುರ್ಗ

(ರೂ.ಲಕ್ಷಗಳಲ್ಲಿ)

| ವಿಧಾನಸಭಾ ಕ್ಷೇತ್ರ | ತಾಲ್ಲೂಕು | ಕ್ರ.ಸ | ಗ್ರಾಮಗಳ ಹೆಸರು | 2011 ರ ಜನಗಣತಿ ಪ್ರಕಾರ ಜನಸಂಖ್ಯೆ | | | ಗ್ರಾಮವಾರು ನಿಗದಿಪಡಿಸಿದ ಅನುದಾನ | ವಿಧಾನಸಭಾ ಕ್ಷೇತ್ರವಾರು ನಿಗದಿಪಡಿಸಿದ ಅನುದಾನ |
|---|---|---|---|---|---|---|---|---|
| | | | | ಪರಿಶಿಷ್ಟ ಜಾತಿ | ಪರಿಶಿಷ್ಟ ಪಂಗಡ | ಒಟ್ಟು ಜನಸಂಖ್ಯೆ | | |
| ಹೊಸದುರ್ಗ | ಹೊಸದುರ್ಗ | 1 | ಅರೇಹಳ್ಳಿ | 241 | 20 | 1748 | 123.47 | 375.00 |
| | | 2 | ನಾಗೇನಹಳ್ಳಿ | 42 | 18 | 1327 | 93.73 | |
| | | 3 | ಮಳಲಿ | 346 | 180 | 1191 | 84.12 | |
| | | 4 | ಕೈನಡು | 146 | 04 | 1043 | 73.68 | |
| | | | ಒಟ್ಟು | 775 | 222 | 5309 | 375.00 | |

(ಬೂವನಹಳ್ಳಿನಾಗರಾಜ್)
ನಿರ್ದೇಶಕರು(ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ